ಕೆಯುಡಬ್ಲ್ಯೂಎಸ್ ಅಂಡ್ ಡಿ.ಬಿ ವತಿಯಿಂದ ಗುಂಡ್ಲುಪೇಟೆ ಪಟ್ಟಣಕ್ಕೆ ಕುಡಿಯುವ ನೀರಿನ ಯೋಜನೆ

2095 (2214) - ಶ್ರೀ ವ್ಹದೇವ ಪ್ರಸಾದ್ ಹೆಚ್.ಎಸ್. (ಗುಂಡ್ಲುಪೇಟೆ): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೆಯುಡಬ್ಲ್ಯೂಎಸ್ ಅಂಡ್ ಡಿ ಬಿ ವತಿಯಿಂದ ಗುಂಡ್ಲುಪೇಟೆ ಪಟ್ಟಣಕ್ಕೆ ಕುಡಿಯುವ ನೀರಿನ ಯೋಜನೆಯ ಮಾರ್ಗ ಮಧ್ಯದಲ್ಲಿ ಬರುವ ಗ್ರಾಮಗಳಿಗೆ ನೀರು ಒದಗಿಸಲು ಯೋಜಿಸಲಾಗಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಇ) ಪಟ್ಟಣಕ್ಕೆ ನೀರು ಒದಗಿಸುವಾಗಲೇ ಈ ಗ್ರಾಮಗಳಿಗೆ ನೀರು ಒದಗಿಸಲಾಗುತ್ತದೆಯೇ?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಯವರು):

ಅ) ಯೋಜಿಸಲಾಗಿದೆ.

ಆ) ಗುಂಡ್ಲುಪೇಟೆ ಪಟ್ಟಣಕ್ಕೆ ಕುಡಿಯುವ ನೀರಿನ ಯೋಜನೆಯ ಮಾರ್ಗ ಮಧ್ಯದಲ್ಲಿ ಬರುವ ಗ್ರಾಮಗಳಿಗೆ ನೀರು ಒದಗಿಸಲು ಕೊಳವೆ ಮಾರ್ಗದಲ್ಲಿ 'ಟಿ' ಗಳನ್ನು ಅಳವಡಿಸಲಾಗಿದೆ.

ಇ) ಮಾರ್ಗ ಮಧ್ಯದಲ್ಲಿ ಬರುವ ಹಳ್ಳಿಗಳಿಗೆ ನೀರು ಒದಗಿಸುವ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯೊಂದಿಗೆ ವ್ಯವಹರಿಸಲಾಗುತ್ತಿದ್ದು, ಅವರ ಪ್ರತಿ ಕ್ರಿಯೆಯನ್ನು ಅನುಸರಿಸಿ ಕ್ರಮ ಜರುಗಿಸಲಾಗುವುದು.

ಗುಂಡ್ಲುಪೇಟೆ ತಾಲ್ಲೂಕು ಗೋಪಾಲಪುರ ಗ್ರಾಮದಲ್ಲಿ ಕೆರೆ ನಿರ್ಮಾಣ

2097 (2218) - ಶ್ರೀ ಮಹದೇವ ಪ್ರಸಾದ್ ಹೆಚ್.ಎಸ್. (ಗುಂಡ್ಲುಪೇಟೆ): ಮಾನ್ಯ ಗೃಹ ಮತ್ತು ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಂಡ್ಲುಪೇಟೆ ತಾಲ್ಲೂಕು ಗೋಪಾಲಪುರ ಗ್ರಾಮದ ಬಳಿ ಕೆರೆ ನಿರ್ಮಿಸಲಾಗುತ್ತಿದೆಯೇ;

ಆ) ಹಾಗಿದ್ದಲ್ಲಿ ಯಾವಾಗ ಕೆಲಸ ಪ್ರಾರಂಭಿಸಲಾಗಿದೆ;

ಇ) ಕಾಮಗಾರಿ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಮತ್ತು ಸಣ್ಣ ನೀರಾವರಿ ಸಚಿವರು):

ಅ) ಹೌದು.

ಆ) ಈ ಯೋಜನೆಯ ಕೆಲಸವನ್ನು ದಿನಾಂಕ: 1-7-99 ರಂದು ಪ್ರಾರಂಭಿಸಲಾಗಿದೆ.

ಇ) ಹೌದು.

ಈ) ಸದರಿ ಯೋಜನೆಯ ಉಳಿಕೆ ಕೆಲಸಗಳಿಗೆ ಟೆಂಡರ್ ಪರಿಶೀಲನೆಯಲ್ಲಿದ್ದು, ಅನುದಾನದ ಕೊರತೆಯಿಂದಾಗಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿಲ್ಲ. ಅನುದಾನದ ಲಭ್ಯತೆಯ ಮೇರೆಗೆ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು.

ಸರ್ಕಾರಿ ಕೆಲಸದಲ್ಲಿರುವ ದಂಪತಿಗಳ ವರ್ಗಾವಣೆ ಕುರಿತು

2098 (2509) - ಶ್ರೀ ಮೋಹನ್ ಕೆ ಶೆಟ್ಟಿ (ಕುಮಟ): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?